ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಮೊದಲನೇ ಅಧಿವೇಶನ
(2ನೇ ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 9ನೇ ಜುಲೈ, 2018

(ಸಮಯ: ಬೆಳಿಗ್ಗೆ 10.30 ಗಂಟೆಗೆ)

1. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ನಡೆದ ಚರ್ಚೆಗೆ ಸರ್ಕಾರದ ಉತ್ತರ

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

3. ವಿತ್ತೀಯ ಕಾರ್ಯಕಲಾಪಗಳು

ಅ) 2018-19ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

ಆ) 2018-19ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮಂಡನೆ ಹಾಗೂ ಚರ್ಚೆ:

ಬೇಡಿಕೆ ಸಂಖ್ಯೆ	**ಬೇಡಿಕೆಯ ಹೆಸರು**
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
06	ಮೂಲಭೂತ ಸೌಕರ್ಯ ಅಭಿವೃದ್ಧಿ
24	ಇಂಧನ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ

... 2/ ..

05	ಒಳಾಡಳಿತ ಮತ್ತು ಸಾರಿಗೆ
20	ಲೋಕೋಪಯೋಗಿ
14	ಕಂದಾಯ
09	ಸಹಕಾರ
21	ಜಲ ಸಂಪನ್ಮೂಲ
17	ಶಿಕ್ಷಣ
15	ಮಾಹಿತಿ ತಂತ್ರಜ್ಞಾನ
18	ವಾಣಿಜ್ಯ ಮತ್ತು ಕೈಗಾರಿಕೆ
07	ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
01	ಕೃಷಿ ಮತ್ತು ತೋಟಗಾರಿಕೆ
02	ಪಶುಸಂಗೋಪನೆ ಮತ್ತು ಮೀನುಗಾರಿಕೆ
10	ಸಮಾಜ ಕಲ್ಯಾಣ
16	ವಸತಿ
19	ನಗರಾಭಿವೃದ್ಧಿ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು
13	ಆಹಾರ ಮತ್ತು ನಾಗರೀಕ ಸರಬರಾಜು
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
23	ಕಾರ್ಮಿಕ ಮತ್ತು ಕೌಶಲ್ಯ ಅಭಿವೃದ್ಧಿ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪಕಾಲಾವಧಿ ಚರ್ಚೆ

1) **ಶ್ರೀ ಜೆ.ಸಿ. ಮಾಧುಸ್ವಾಮಿ, ಶ್ರೀಮತಿ ಕೆ. ಪೂರ್ಣಿಮಾ, ಶ್ರೀ ಗೂಳಿಹಟ್ಟಿ ಡಿ. ಶೇಖರ್ ಹಾಗೂ ಶ್ರೀ ಬೆಳ್ಳಿಪ್ರಕಾಶ್ ಇವರುಗಳು** ಕರ್ನಾಟಕದಲ್ಲಿರುವ ಗೊಲ್ಲ (ಯಾದವ) ಜನಾಂಗದವರನ್ನು ಮೊದಲು B.T. ವರ್ಗಕ್ಕೆ ಸೇರಿಸಿದ್ದು ತದನಂತರ B.C.M-A ವರ್ಗಕ್ಕೆ ಸೇರಿಸಲಾಗಿರುತ್ತದೆ. ಆದರೆ, ಅವರುಗಳು ಗುಡ್ಡಗಾಡಿನಲ್ಲಿ ಗುಡಿಸಲುಗಳಲ್ಲಿ ವಾಸ ಮಾಡುತ್ತಿರುವುದರಿಂದ ಅವರುಗಳನ್ನು S.T. (ಪರಿಶಿಷ್ಟ ವರ್ಗ) ವರ್ಗಕ್ಕೆ ಸೇರಿಸುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀ ಪಿ. ರಾಜೀವ್, ಶ್ರೀ ಡಿ.ಎಸ್. ಸುರೇಶ್ ಮತ್ತು ಶ್ರೀಮತಿ ಕೆ. ಪೂರ್ಣಿಮಾ ಇವರುಗಳು** ರೈಟೆಕ್ ಕೃಷಿ ವಿಶ್ವವಿದ್ಯಾಲಯವು ಕೃಷಿ ಶಿಕ್ಷಣದ ಮೂಲ ಉದ್ದೇಶಕ್ಕೆ ಧಕ್ಕೆ ಉಂಟು ಮಾಡಿರುವುದಲ್ಲದೆ ಸರ್ಕಾರಿ ನಿಯಮಗಳನ್ನು ಉಲ್ಲಂಘನೆ ಮಾಡಿರುವುದರಿಂದ ರೈತರು ಹಾಗೂ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿರುವ ಬಗ್ಗೆ ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಜಿ. ಸೋಮಶೇಖರ ರೆಡ್ಡಿ** ಅವರು ಬಳ್ಳಾರಿ ವಿಮ್ಸ್ ಆಸ್ಪತ್ರೆಗೆ ಬರುವ ಸಾರ್ವಜನಿಕರು ಹೆಚ್ಚಿನ ಚಿಕಿತ್ಸೆ ಸೌಲಭ್ಯವಿಲ್ಲದೆ ತೊಂದರೆ ಅನುಭವಿಸುತ್ತಿದ್ದು, ಸಂಸ್ಥೆಗೆ ಬಿಡುಗಡೆಯಾಗಿರುವ ಅನುದಾನ ಬಳಕೆ ಹಾಗೂ ಮೂಲಭೂತ ಸೌಕರ್ಯ ನೀಡುವ ಸಂಬಂಧ ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ಮಾನ್ಯ ಜಲಸಂಪನ್ಮೂಲ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು

2) **ಶ್ರೀ ಪಿ. ರಾಜೀವ್** ಅವರು ಆಂಧ್ರಪ್ರದೇಶದ ಗಡಿ ಭಾಗಕ್ಕೆ ಹೊಂದಿಕೊಂಡಿರುವ ಕರ್ನಾಟಕದ ಹಳ್ಳಿಗಳಲ್ಲಿ ವಾಸವಾಗಿರುವ **ದಾಸರ** ಜಾತಿಗೆ ಸೇರಿದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಅನಕ್ಷರಸ್ಥರಾಗಿದ್ದು ಅವರುಗಳು ಮಾಹಿತಿಯ ಕೊರತೆಯಿಂದ **ದಾಸರಿ** ಎಂದು ತಪ್ಪಾಗಿ ನಮೂದಿಸಿಕೊಂಡಿರುವುದರಿಂದ ಅವರುಗಳಿಗೆ ಪರಿಶಿಷ್ಟ ಜಾತಿ ಪ್ರಮಾಣ ಪತ್ರ ನೀಡಲು ತಾಲ್ಲೂಕು ಕಛೇರಿಗಳಲ್ಲಿ ನಿರಾಕರಿಸುತ್ತಿರುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

... 4/ ..

3) **ಶ್ರೀ ನರಸಿಂಹ ನಾಯಕ (ರಾಜುಗೌಡ)** ಅವರು ಹೈದ್ರಾಬಾದ್ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಭೂ ಪರಿವರ್ತನೆಗೆ ಅನುಮತಿ ಕೋರಿ ಅರ್ಜಿ ಸಲ್ಲಿಸಿದವರಿಗೆ ಅನುಮತಿ ನೀಡುವ ಮತ್ತು ತೆರಿಗೆ ಸೌಲಭ್ಯ ಸೇರಿದಂತೆ ಅಗತ್ಯ ಸವಲತ್ತುಗಳನ್ನು ನೀಡಿ ಕೈಗಾರಿಕೆಗಳ ಸ್ಥಾಪನೆಗೆ ಪ್ರೋತ್ಸಾಹ ನೀಡುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮಾಹಿತಿ ತಂತ್ರಜ್ಞಾನ ಹಾಗೂ ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

4) **ಶ್ರೀ ಪ್ರತಾಪ್‌ಗೌಡ ಪಾಟೀಲ್** ಅವರು ಹೊಸ ತಾಲ್ಲೂಕುಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯ ಪ್ರಾರಂಭ ಮಾಡದಿರುವ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

5) **ಶ್ರೀ ಟಿ.ಡಿ. ರಾಜೇಗೌಡ** ಅವರು ರೈತರ ಬಗರ್ ಹುಕ್ಕುಂ ಸಾಗುವಳಿ ಮಾಡಿಕೊಂಡಿರುವ ಬಗ್ಗೆ ಅರ್ಜಿ ಸಲ್ಲಿಸಲು ನೀಡಿರುವ ಸೌಲಭ್ಯದ ಬಗ್ಗೆ ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

6) **ಶ್ರೀ ಕೆ. ಮಹಾದೇವ** ಅವರು ಪಿರಿಯಾಪಟ್ಟಣ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕರಡಿ ಬೊಕ್ಕೆ ಗಿರಿಜನರ ಹಾಡಿಯು ಮೂಲಭೂತ ಸೌಲಭ್ಯಗಳಿಲ್ಲದೇ ಅಲ್ಲಿನ ಜನರ ಬದುಕು ಶೋಚನಿಯ ಸ್ಥಿತಿಯಲ್ಲಿರುವುದರಿಂದ, ಅವರುಗಳಿಗೆ ಮೂಲಭೂತ ಸೌಲಭ್ಯಗಳನ್ನು ಕೂಡಲೇ ನೀಡುವ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಎಸ್. ಮೂರ್ತಿ
ಕಾರ್ಯದರ್ಶಿ.

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm